**All India Radio: Bangalore**
**National Bulletin In Kannada**
**30.03.2026 07.35 a.m.**

**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**30.03.2026 07.35 a.m.**

**<><><><>**

ಮುಖ್ಯಾಂಶಗಳು

1. ಮೇರಾ ಬೂತ್ ಸಬ್ಸೆ ಮಜಬೂತ್: ಅಸ್ಸಾಂ ಮತ್ತು ಪುದುಚೇರಿ ಕಾರ್ಯಕರ್ತರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಸಂವಾದ
2. ಪಶ್ಚಿಮ ಬಂಗಾಳದಲ್ಲಿ ಆಡಳಿತಾತ್ಮಕ ಬದಲಾವಣೆ: ೧೭೦ ಪೊಲೀಸ್ ಅಧಿಕಾರಿಗಳ ವರ್ಗಾವಣೆಗೆ ಚುನಾವಣಾ ಆಯೋಗ ಆದೇಶ
3. ೨೧ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಉತ್ತಮ ಗುಣಮಟ್ಟದ ಸೀಮೆಎಣ್ಣೆ ವಿತರಿಸಲು ಕೇಂದ್ರ ಸರ್ಕಾರ ಗೆಜೆಟ್ ಅಧಿಸೂಚನೆ
4. ಸ್ಪ್ಯಾನಿಶ್ ಪ್ಯಾರಾ ಬ್ಯಾಡ್ಮಿಂಟನ್ ಅಂತಾರಾಷ್ಟ್ರೀಯ ಟೂರ್ನಿ : ಭಾರತದ ಪ್ರಮೋದ್ ಭಗತ್‌ಗೆ ೧ ಚಿನ್ನ, ೨ ಬೆಳ್ಳಿ
5. ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ : ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಮುಂಬೈ ಇಂಡಿಯನ್ಸ್‌ಗೆ ೬ ವಿಕೆಟ್‌ಗಳ ಜಯ

<><><><>

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ 'ಮೇರಾ ಬೂತ್ ಸಬ್ಸೆ ಮಜಬೂತ್' ಅಭಿಯಾನದ ಅಂಗವಾಗಿ ಇಂದು ಅಸ್ಸಾಂ ಮತ್ತು ಪುದುಚೇರಿಯ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. 'ನಮೋ ಆಪ್' ಮೂಲಕ ನಡೆಯಲಿರುವ ಈ ಸಂವಾದದಲ್ಲಿ ಪ್ರಧಾನಿಯವರು ಕಾರ್ಯಕರ್ತರೊಂದಿಗೆ ನೇರ ಸಮಾಲೋಚನೆ ನಡೆಸಲಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ, ಕಳೆದ ಒಂದು ದಶಕದಲ್ಲಿ ಅಸ್ಸಾಂ ಸಾಧಿಸಿರುವ ಅಭಿವೃದ್ಧಿಯು ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ಶ್ಲಾಘಿಸಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ರಾಜ್ಯವು ಕಂಡಿರುವ ಅಭೂತಪೂರ್ವ ಪ್ರಗತಿಯಿಂದಾಗಿ, ಜನತೆಯು ಮುಂದಿನ ಐದು ವರ್ಷಗಳ ಕಾಲ ಮತ್ತೆ ಎನ್‌ಡಿಎ ಸರ್ಕಾರವನ್ನು ಅಧಿಕಾರಕ್ಕೆ ತರಲು ನಿರ್ಧರಿಸಿದ್ದಾರೆ ಎಂದು

ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮತ್ತೊಂದು ಪೋಸ್ಟ್‌ನಲ್ಲಿ ಪುದುಚೇರಿಯ ಬಗ್ಗೆ ಉಲ್ಲೇಖಿಸಿರುವ ಅವರು, ಕಳೆದ ಐದು ವರ್ಷಗಳಲ್ಲಿ ಎನ್‌ಡಿಎ ಸರ್ಕಾರವು ಅಲ್ಲಿನ ಜನರ ಆಶೋತ್ತರಗಳನ್ನು ಈಡೇರಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿದೆ ಎಂದು ತಿಳಿಸಿದ್ದಾರೆ. ಪುದುಚೇರಿಯ ಉತ್ಸಾಹಿ ಕಾರ್ಯಕರ್ತರೊಂದಿಗೆ ಸಂವಾದ ನಡೆಸಲು ತಾವು ಕುತೂಹಲದಿಂದ ಕಾಯುತ್ತಿರುವುದಾಗಿ ಹೇಳಿದ್ದಾರೆ.

<><><><>

ಪಶ್ಚಿಮ ಬಂಗಾಳದ ಆಡಳಿತ ವ್ಯವಸ್ಥೆಯಲ್ಲಿ ಭಾರಿ ಬದಲಾವಣೆ ತಂದಿರುವ ಕೇಂದ್ರ ಚುನಾವಣಾ ಆಯೋಗ, ರಾಜ್ಯಾದ್ಯಂತ ಒಟ್ಟು ೧೭೦ ಪೊಲೀಸ್ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆಗೊಳಿಸಿದೆ. ಈ ಪಟ್ಟಿಯಲ್ಲಿ ಭವಾನಿಪುರ ಮತ್ತು ನಂದಿಗ್ರಾಮದಂತಹ ಪ್ರಮುಖ ವಿಧಾನಸಭಾ ಕ್ಷೇತ್ರಗಳ ಪೊಲೀಸ್ ಠಾಣೆಗಳೂ ಸೇರಿವೆ. ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಶಿಫಾರಸಿನ ಮೇರೆಗೆ ಆಯೋಗ ಈ ನಿರ್ಧಾರ ಕೈಗೊಂಡಿದೆ. ಒಟ್ಟು ೧೮೪ ಪೊಲೀಸ್ ಅಧಿಕಾರಿಗಳ ಮರುಹೊಂದಾಣಿಕೆಗೆ ಆಯೋಗ ಅನುಮೋದನೆ ನೀಡಿದ್ದು, ಇದರಲ್ಲಿ ೧೧ ಉನ್ನತ ಶ್ರೇಣಿಯ ಅಧಿಕಾರಿಗಳೂ ಸೇರಿದ್ದಾರೆ. ಈ ವರ್ಗಾವಣೆ ಪ್ರಕ್ರಿಯೆಯು ಕೂಚ್ ಬೆಹಾರ್, ಅಲಿಪುರ್ದುವಾರ್, ಮಾಲ್ಡಾ, ಮುರ್ಷಿದಾಬಾದ್, ಉತ್ತರ ಮತ್ತು ದಕ್ಷಿಣ ೨೪ ಪರಗಣಗಳು, ಹೌರಾ, ಹೂಗ್ಲಿ ಹಾಗೂ ಪೂರ್ವ ಮತ್ತು ಪಶ್ಚಿಮ ಮಿಡ್ನಾಪುರ ಜಿಲ್ಲೆಗಳ ಮೇಲೆ ಪರಿಣಾಮ ಬೀರಿದೆ. ಕೋಲ್ಕತ್ತಾ ಪೊಲೀಸ್ ವ್ಯಾಪ್ತಿಯಲ್ಲಿ ಹಲವು ಠಾಣಾಧಿಕಾರಿಗಳನ್ನು ಬದಲಾಯಿಸಲಾಗಿದ್ದು, ನಂದಿಗ್ರಾಮ, ಖೇಜುರಿ ಸತ್ತು ಚಂಡೀಪುರದಂತಹ ರಾಜಕೀಯವಾಗಿ ಸೂಕ್ಷ್ಮ ಪ್ರದೇಶಗಳಿಗೆ ಹೊಸ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸುವಲ್ಲಿ ಯಾವುದೇ ರೀತಿಯ ಸಡಿಲಿಕೆ ಅಥವಾ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ ಎಂದು ಚುನಾವಣಾ ಆಯೋಗವು ಸ್ಪಷ್ಟ ನಿರ್ದೇಶನ ನೀಡಿದೆ.

<><><><>

ಅಮೆರಿಕ, ರಾಜತಾಂತ್ರಿಕತೆಯ ಸೋಗಿನಲ್ಲಿ ಇರಾನ್ ಮೇಲೆ ಭೂಸೇನಾ ದಾಳಿಗೆ ಸಂಚು ರೂಪಿಸುತ್ತಿದೆ ಎಂದು ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಘೇರ್ ಖಾಲಿಬಾಫ್ ಗಂಭೀರ ಆರೋಪ ಮಾಡಿದ್ದಾರೆ. ಅಮೆರಿಕದ ಪಡೆಗಳು ಇರಾನ್ ನೆಲ ಪ್ರವೇಶಿಸಿದರೆ ಕಠಿಣ ಪ್ರತಿರೋಧ ಎದುರಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ. ಈ ನಡುವೆ ೩ ಸಾವಿರದ ೫೦೦

ಸೈನಿಕರನ್ನು ಹೊತ್ತ ಅಮೆರಿಕದ 'ಯುಎಸ್‌ಎಸ್ ಟ್ರಿಪೋಲಿ' ಯುದ್ಧನೌಕೆಯು ಮಧ್ಯಪ್ರಾಚ್ಯಕ್ಕೆ ಆಗಮಿಸಿದ್ದು, ಇಸ್ರೇಲ್ ಸೇನೆಯೊಂದಿಗೆ ಅಮೆರಿಕದ ಉನ್ನತ ಅಧಿಕಾರಿಗಳು ಇರಾನ್‌ನ ಶಸ್ತ್ರಾಸ್ತ್ರ ಕೇಂದ್ರಗಳ ಮೇಲೆ ದಾಳಿ ನಡೆಸುವ ಕುರಿತು ಸಮಾಲೋಚನೆ ನಡೆಸಿದ್ದಾರೆ. ಪ್ರತಿಯಾಗಿ, ಅಮೆರಿಕ ಮತ್ತು ಇಸ್ರೇಲ್ ಅಧಿಕಾರಿಗಳ ಖಾಸಗಿ ನಿವಾಸಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳನ್ನು ತಮ್ಮ ಸೇನಾ ಗುರಿಗಳೆಂದು ಇರಾನ್ ಘೋಷಿಸಿದೆ. ಈ ಭೀಕರ ಯುದ್ಧದಲ್ಲಿ ಇದುವರೆಗೆ ಇರಾನ್‌ನಲ್ಲಿ ೧ ಸಾವಿರದ ೯೦೦ ಸೇರಿದಂತೆ ಒಟ್ಟು ೩ ಸಾವಿರಕ್ಕೂ  ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಸೌದಿ ಅರೇಬಿಯಾ, ಈಜಿಪ್ಟ್ ಮತ್ತು ಟರ್ಕಿ ದೇಶಗಳು ಸಂಘರ್ಷ ತಣಿಸಲು ಇಸ್ಲಾಮಾಬಾದ್‌ನಲ್ಲಿ ಮಾತುಕತೆ ನಡೆಸಿದರೂ ಯಾವುದೇ ಮಹತ್ವದ ತೀರ್ಮಾನ ಹೊರಬಂದಿಲ್ಲ.

<><><>

ದೇಶಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಸಾಕಷ್ಟು ದಾಸ್ತಾನು ಲಭ್ಯವಿದ್ದು, ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡಬಾರದು ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ಗ್ರಾಹಕರ ಹಿತದೃಷ್ಟಿಯಿಂದ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಪ್ರತಿ ಲೀಟರ್‌ಗೆ ೧೦ ರೂಪಾಯಿ ಕಡಿತಗೊಳಿಸಲಾಗಿದೆ ಎಂದು ಸಚಿವಲಯ ಪುನರುಚ್ಚರಿಸಿದೆ. ಇದರೊಂದಿಗೆ ದೇಶೀಯ ಮಾರುಕಟ್ಟೆಯಲ್ಲಿ ಇಂಧನದ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ವಿಮಾನ ಇಂಧನದ ಮೇಲೆ ರಫ್ತು ಸುಂಕವನ್ನು ವಿಧಿಸಲಾಗಿದೆ. ದೇಶೀಯ ಎಲ್‌ಪಿಜಿ ಪೂರೈಕೆಯು ಸಹಜ ಸ್ಥಿತಿಯಲ್ಲಿದ್ದು, ಪ್ರತಿದಿನ ೫೫ ಲಕ್ಷಕ್ಕೂ ಹೆಚ್ಚು ಸಿಲಿಂಡರ್‌ಗಳನ್ನು ವಿತರಿಸಲಾಗುತ್ತಿದೆ. ವಾಣಿಜ್ಯ ಎಲ್‌ಪಿಜಿ ಪೂರೈಕೆಯು ಬಿಕ್ಕಟ್ಟಿನ ಮುಂಚಿನ ಮಟ್ಟದ ಶೇಕಡ ೭೦ರಷ್ಟು ತಲುಪಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

<><><>

ಜಾಗತಿಕ ರಾಜಕೀಯ ಸನ್ನಿವೇಶದಿಂದಾಗಿ ಇಂಧನ ಪೂರೈಕೆಯ ಮೇಲೆ ಉಂಟಾಗಿರುವ ಪರಿಣಾಮಗಳನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರ ೨೧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ಉತ್ತಮ ಗುಣಮಟ್ಟದ ಸೀಮೆಎಣ್ಣೆಯನ್ನು ವಿತರಿಸಲು ಅನುಮತಿಸಿ ಗೆಜೆಟ್ ಅಧಿಸೂಚನೆ ಹೊರಡಿಸಿದೆ. ಈ ಹಿಂದೆ ಸೀಮೆಎಣ್ಣೆ ಮುಕ್ತ ಎಂದು ಘೋಷಿಸಲಾಗಿದ್ದ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿನ ನಿಯೋಜಿತ ಇಂಧನ ಕೇಂದ್ರಗಳಲ್ಲಿ ಮನೆ ಬಳಕೆಯ ಅಡುಗೆ ಮತ್ತು ಬೆಳಕಿನ ಉದ್ದೇಶಗಳಿಗಾಗಿ

ಸೀಮೆಎಣ್ಣೆಯನ್ನು ಸಂಗ್ರಹಿಸಲು ಮತ್ತು ವಿತರಿಸಲು ಈ ಅಧಿಸೂಚನೆಯಡಿ ಅವಕಾಶ ನೀಡಲಾಗಿದೆ.

<><><>

ಲೋಕಸಭೆಯಲ್ಲಿಂದು ಇನ್ಸಾಲ್ವೆನ್ಸಿ ಮತ್ತು ದಿವಾಳಿತನ ಸಂಹಿತೆ ತಿದ್ದುಪಡಿ ವಿಧೇಯಕ-೨೦೨೫ರ ಕುರಿತು ಹೆಚ್ಚಿನ ಚರ್ಚೆ ನಡೆಯಲಿದೆ. ೨೦೧೬ರ ಮೂಲ ದಿವಾಳಿತನ ಸಂಹಿತೆಗೆ ತಿದ್ದುಪಡಿ ತರುವ ಈ ವಿಧೇಯಕ ಕಂಪನಿಗಳು ಮತ್ತು ವ್ಯಕ್ತಿಗಳ ವ್ಯವಹಾರ ಪ್ರಕ್ರಿಯೆಯಲ್ಲಿನ ವಿಳಂಬ ಮತ್ತು ವ್ಯಾಖ್ಯಾನದ ಸಮಸ್ಯೆಗಳನ್ನು ಬಗೆಹರಿಸುವ ಗುರಿಯನ್ನು ಹೊಂದಿದೆ. ಇದರೊಂದಿಗೆ ದೇಶವನ್ನು ಎಡಪಂಥೀಯ ಉಗ್ರವಾದದಿಂದ ಮುಕ್ತಗೊಳಿಸುವ ನಿಟ್ಟಿನಲ್ಲಿ ನಡೆಯುತ್ತಿರುವ ಪ್ರಯತ್ನಗಳ ಕುರಿತು ಸದನ ಚರ್ಚೆ ನಡೆಸುವ ನಿರೀಕ್ಷೆಯಿದೆ. ರಾಜ್ಯಸಭೆಯಲ್ಲಿಂದು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಾಮಾನ್ಯ ಆಡಳಿತ ವಿಧೇಯಕ-೨೦೨೬ ಅನ್ನು ಪರಿಗಣನೆಗೆ ತೆಗೆದುಕೊಂಡು ಅಂಗೀಕರಿಸುವ ಸಾಧ್ಯತೆಯಿದೆ.

<><><>

ದೇಶದ ಆಹಾರ ಭದ್ರತೆ ಮತ್ತು ಜೀವನೋಪಾಯವನ್ನು ಖಾತರಿ ಪಡಿಸುವಲ್ಲಿ ಮೀನುಗಾರಿಕಾ ವಲಯವು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಹೇಳಿದ್ದಾರೆ. ಸುಸ್ಥಿರ ಮೀನುಗಾರಿಕಾ ಪದ್ಧತಿಗಳನ್ನು ಅನುಸರಿಸುತ್ತಿರುವ ೯೦ ಲಕ್ಷಕ್ಕೂ ಹೆಚ್ಚು ಸಣ್ಣ, ಸಾಂಪ್ರದಾಯಿಕ ಮತ್ತು ಕುಶಲಕರ್ಮಿ ಮೀನುಗಾರ ಕುಟುಂಬಗಳಿಗೆ ಈ ವಲಯ ಆಧಾರವಾಗಿದೆ ಎಂದು ಅವರು ತಿಳಿಸಿದ್ದಾರೆ. ಕ್ಯಾಮರೂನ್‌ನಲ್ಲಿ ನಡೆದ ವಿಶ್ವ ವ್ಯಾಪಾರ ಸಂಸ್ಥೆಯ ೧೪ನೇ ಸಚಿವ ಮಟ್ಟದ ಸಮ್ಮೇಳನದಲ್ಲಿ ಭಾರತೀಯ ನಿಯೋಗದ ನೇತೃತ್ವ ವಹಿಸಿದ್ದ ಸಚಿವರು ಮೀನುಗಾರಿಕಾ ಆಡಳಿತದಲ್ಲಿ ಭಾರತದ ಸಮತೋಲಿತ ಮತ್ತು ಜನಕೇಂದ್ರಿತ ದೃಷ್ಟಿಕೋನವನ್ನು ಮಂಡಿಸಿದರು. ಇದೇ ತಿಂಗಳ ೨೬ರಂದು ಆರಂಭವಾಗಿದ್ದ ವಿಶ್ವವ್ಯಾಪಾರ ಸಂಸ್ಥೆ ಡಬ್ಲ್ಯುಟಿಒದ ೧೪ನೇ ಸಚಿವ ಮಟ್ಟದ ಸಮ್ಮೇಳನ ನಿನ್ನೆ ಸಂಪನ್ನಗೊಂಡಿದೆ.

<><><>

ಸ್ಪೇನ್‌ನ ಟೊಲೆಡೊದಲ್ಲಿ ನಡೆದ ಸ್ಪ್ಯಾನಿಶ್ ಪ್ಯಾರಾ ಬ್ಯಾಡ್ಮಿಂಟನ್ ಅಂತಾರಾಷ್ಟ್ರೀಯ ಟೂರ್ನಿಯಲ್ಲಿ ಭಾರತದ ಪ್ಯಾರಾಲಿಂಪಿಕ್ ಚಾಂಪಿಯನ್ ಪ್ರಮೋದ್ ಭಗತ್ ಒಂದು ಚಿನ್ನ, ಎರಡು ಬೆಳ್ಳಿ ಪದಕಗಳನ್ನು ಗೆಲ್ಲುವ ಮೂಲಕ ಉತ್ತಮ ಪ್ರದರ್ಶನವನ್ನು ನೀಡಿದ್ದಾರೆ. ಮಿಶ್ರ ಡಬಲ್ಸ್‌ನ

ಎಸ್‌ಎಲ್-೩, ಎಸ್‌ಯು-೫, ವಿಭಾಗದಲ್ಲಿ ಮನಿಶಾ ರಾಮ್‌ದಾಸ್ ಹಾಗೂ ಪ್ರಮೋದ್ ಭಗತ್ ಜೋಡಿ ಫೈನಲ್ ಪಂದ್ಯದಲ್ಲಿ ಭಾರತದವರೇ ಆದ ನಿತೇಶ್‌ಕುಮಾರ್ ಮತ್ತು ತುಳಸಿಮತಿ ಮುರುಗೇಶನ್ ಜೋಡಿಯನ್ನು ೨೧-೧೫, ೨೪-೨೨ ನೇರ ಸೆಟ್‌ಗಳಿಂದ ಮಣಿಸಿದೆ. ಪುರುಷರ ಸಿಂಗಲ್ಸ್‌ನಲ್ಲಿ ಪ್ರಮೋದ್ ಭಗತ್, ನಿತೇಶ್‌ಕುಮಾರ್ ವಿರುದ್ಧ ಪರಾಭವಗೊಂಡು ಬೆಳ್ಳಿ ಪದಕ ಪಡೆದರೆ, ನಿತೇಶ್ ಕುಮಾರ್ ಸ್ವರ್ಣಪದಕ ತಮ್ಮದಾಗಿಸಿಕೊಂಡರು. ಪುರುಷರ ಡಬಲ್ಸ್‌ನಲ್ಲಿ ಭಾರತದ ನವೀನ್ ಶಿವಕುಮಾರ್ ಮತ್ತು ಸೂರ್ಯಕಾಂತ್ ಯಾದವ್ ಜೋಡಿ ಪ್ರಮೋದ್ ಭಗತ್ ಮತ್ತು ಸುಕಾಂತ್ ಕದಮ್ ಜೋಡಿ ವಿರುದ್ಧ ಗೆಲುವು ದಾಖಲಿಸಿ ಸ್ವರ್ಣಪದಕ ತನ್ನದಾಗಿಸಿಕೊಂಡಿತು. ಮಹಿಳಾ ಸಿಂಗಲ್ಸ್‌ನಲ್ಲಿ ತುಳಸಿಮತಿ ಮುರುಗೇಶನ್ ಚಿನ್ನದ ಪದಕ ಪಡೆದರು.

<><><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೬ ವಿಕೆಟ್‌ಗಳಿಂದ ಜಯ ದಾಖಲಿಸಿದೆ. ಮೊದಲ ಬ್ಯಾಟಿಂಗ್ ಮಾಡಿದ ಕೊಲ್ಕತ್ತಾ ತಂಡ ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೨೦ ರನ್ ಗಳಿಸಿತು. ಪ್ರತಿಯಾಗಿ ೨೨೧ ರನ್‌ಗಳ ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್ ತಂಡ ೧೯.೧ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೨೪ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>